**All India Radio: Bangalore**
**Regional Bulletin In Kannada**
**05.06.2025 / 18.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**05.06.2025 / 18.40 p.m.**
**<><><><>**

ಮುಖ್ಯಾಂಶಗಳು

೧. ಕ್ರಿಕೆಟ್ ಅಭಿಮಾನಿಗಳ ಕಾಲ್ತುಳಿತ ಪ್ರಕರಣ ; ಸರ್ಕಾರದ ವಿರುದ್ಧ ಉಚ್ಚ ನ್ಯಾಯಾಲಯ ಅಸಮಾಧಾನ ; ಜಿಲ್ಲಾಧಿಕಾರಿಯಿಂದ ತನಿಖೆ ಆರಂಭ

೨. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರಾಜೀನಾಮೆಗೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಆಗ್ರಹ

೩. ಅಂಗನವಾಡಿಗಳಲ್ಲಿ ಮಕ್ಕಳಿಗೆ ಉತ್ತಮ ಆರೋಗ್ಯ ಹಾಗೂ ಶಿಕ್ಷಣ ನೀಡಲು ಸಚಿವ ಮುನಿಯಪ್ಪ ಕರೆ

೪. ಯೋಗೇಶ್ ಗೌಡ ಹತ್ಯೆ ಪ್ರಕರಣ ; ಹೆಚ್ಚುವರಿ ದಾಖಲೆ ಸಲ್ಲಿಸಲು ಮಾಜಿ ಸಚಿವ ವಿನಯ್ ಕುಲಕರ್ಣಿಗೆ ಸುಪ್ರೀಂಕೋರ್ಟ್ ಅನುಮತಿ

<><><><>

ಆರ್.ಸಿ.ಬಿ. ವಿಜಯೋತ್ಸವದ ವೇಳೆ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ನಡೆದ ಕಾಲ್ತುಳಿತ ಪ್ರಕರಣದಲ್ಲಿ ೧೧ ಜನರು ಸಾವನ್ನಪ್ಪಿದ ಪ್ರಕರಣದ ಕುರಿತು ವರದಿ ನೀಡುವಂತೆ ಸರ್ಕಾರಕ್ಕೆ ಉಚ್ಚ ನ್ಯಾಯಾಲಯ ಸೂಚನೆ ನೀಡಿದೆ.ಸ್ವಯಂ ಪ್ರೇರಿತ ಸಾರ್ವಜನಿಕ ಹಿತಾಸಕ್ತಿ ಮೊಕದ್ದಮೆ ದಾಖಲಿಸಿಕೊಂಡು, ವಿಚಾರಣೆ ನಡೆಸಿದ ನ್ಯಾಯಾಲಯ ಇಂತಹ ಘಟನೆ ತಡೆಯಲು ಪ್ರಮಾಣಿತ ಕಾರ್ಯಾಚರಣೆ ವಿಧಾನ - ಎಸ್‌ಒಪಿ ಇರಬೇಕಲ್ಲವೇ ಎಂದು ಪ್ರಶ್ನಿಸಿದೆ. ವೈದ್ಯಕೀಯ ಸಿಬ್ಬಂದಿ, ಅಂಬ್ಯೂಲೆನ್ಸ್ ವ್ಯವಸ್ಥೆ ಜೊತೆಗೆ ಮಾರ್ಗಸೂಚಿಗಳನ್ನು ಪಾಲಿಸಿದ್ದೀರಾ ಎಂದು ಸರ್ಕಾರಕ್ಕೆ ಹಂಗಾಮಿ ಮುಖ್ಯ ನ್ಯಾಯಮೂರ್ತಿ ವಿ. ಕಾಮೇಶ್ವರ್ ರಾವ್ ಪ್ರಶ್ನಿಸಿದ್ದಾರೆ.ಸರ್ಕಾರದ ಪರ ನ್ಯಾಯಾಲಯಕ್ಕೆ ಮಾಹಿತಿ ನೀಡಿದ ಅಡ್ವೊಕೇಟ್ ಜನರಲ್ ಶಶಿಕಿರಣ್ ಶೆಟ್ಟಿ, ದುರಂತದಲ್ಲಿ ಐವರು ಮಹಿಳೆಯರು ಹಾಗೂ ೬ ಪುರುಷರು ಮೃತಪಟ್ಟಿದ್ದು, ೫೬ ಮಂದಿ ಗಾಯಗೊಂಡಿದ್ದಾರೆ. ಬಂದೋಬಸ್ತ್‌ಗಾಗಿ ೧ ಸಾವಿರದ ೬೪೩ ಪೊಲೀಸ್ ಸಿಬ್ಬಂದಿ ನಿಯೋಜಿಸಲಾಗಿತ್ತು ಎಂದು ನ್ಯಾಯಾಲಯಕ್ಕೆ ತಿಳಿಸಿದ್ದಾರೆ.

<><><><>

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ನಡೆದ ಕಾಲ್ತುಳಿತ ಪ್ರಕರಣದ ಕುರಿತು ಬೆಂಗಳೂರು ಜಿಲ್ಲಾಧಿಕಾರಿ ಜಿ. ಜಗದೀಶ್ ತನಿಖೆ ಆರಂಭಿಸಿದ್ದಾರೆ.ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿಸಿಟಿವಿ ವಿಡಿಯೋ ಹಾಗೂ ಮಾಧ್ಯಮಗಳ ವಿಡಿಯೋವನ್ನು ಪರಿಶೀಲನೆ ನಡೆಸಲಾಗುವುದು. ಇದೇ ತಿಂಗಳ ೧೩ರಂದು

ಸಾರ್ವಜನಿಕರಿಂದ ಹೇಳಿಕೆ ದಾಖಲಿಸಲಾಗುವುದು ಎಂದು ತಿಳಿಸಿದ್ದಾರೆ. ೧೫ ದಿನದೊಳಗೆ ಈ ಕುರಿತ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ಹೇಳಿದ್ದಾರೆ.ದುರಂತದಲ್ಲಿ ಮೇಲ್ನೋಟಕ್ಕೆ ನಿರ್ಲಕ್ಷ್ಯ ಕಂಡು ಬಂದಿದ್ದು, ಬೆಂಗಳೂರು ಪೊಲೀಸ್ ಆಯುಕ್ತರು, ಕೆ.ಎಸ್.ಸಿ.ಎ. ಕಾರ್ಯದರ್ಶಿ, ಕಾರ್ಯಕ್ರಮ ಆಯೋಜಿಸಿದ್ದ ಡಿಎನ್ಎ ಈವೆಂಟ್ ಸಂಸ್ಥೆ, ಆರ್‌ಸಿಬಿ ಆಡಳಿತ ಮಂಡಳಿಗೆ ನೋಟಿಸ್ ನೀಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ : ಬೆಂಗಳೂರು ಜಿಲ್ಲಾಧಿಕಾರಿ ಜಿ. ಜಗದೀಶ್

<><><><>

ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಕಾಲ್ತುಳಿತ ಪ್ರಕರಣದಲ್ಲಿ ಸರ್ಕಾರದಿಂದ ಲೋಪ ನಡೆದಿದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಒಪ್ಪಿಕೊಂಡಿದ್ದಾರೆ.ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ದುರಂತವನ್ನು ತಡೆಯಬಹುದಿತ್ತು ಎಂದು ತಿಳಿಸಿದ್ದಾರೆ. ಯಾರ ಮೇಲೂ ಆರೋಪ ಹೊರಿಸುವ ಪ್ರಶ್ನೆಯೇ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ನಡೆಯದಂತೆ ಸರ್ಕಾರ ಎಚ್ಚೆತ್ತುಕೊಳ್ಳಲಿದೆ ಎಂದು ಹೇಳಿದ್ದಾರೆ.

<><><><>

ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಸಂಭವಿಸಿದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರಾಜೀನಾಮೆ ನೀಡುವಂತೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಒತ್ತಾಯಿಸಿದ್ದಾರೆ.ನವದೆಹಲಿಯಲ್ಲಿ ಮಾತನಾಡಿದ ಅವರು, ಘಟನೆಯ ಕುರಿತಂತೆ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಓರ್ವ ಜಿಲ್ಲಾಧಿಕಾರಿಯಿಂದ ತನಿಖೆ ಹೇಗೆ ಸಾಧ್ಯ ಎಂದು ಪ್ರಶ್ನಿಸಿದ್ದಾರೆ.ಅಧಿಕಾರಿಗಳು ಪೊಲೀಸ್ ಇಲಾಖೆಯ ಸಲಹೆ ಧಿಕ್ಕರಿಸಿ ಸರ್ಕಾರ ಕಾರ್ಯಕ್ರಮ ಆಯೋಜಿಸಿತ್ತು ಎಂದು ದೂರಿದ್ದಾರೆ.

<><><><>

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಕಾಲ್ತುಳಿತದಲ್ಲಿ ಗಾಯಗೊಂಡವರ ಆರೋಗ್ಯವನ್ನು ಕೇಂದ್ರ ಕಾರ್ಮಿಕ ಮತ್ತು ಸಣ್ಣ ಮತ್ತು ಮಧ್ಯಮ ಉದ್ಯಮಗಳ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ವಿಚಾರಿಸಿದ್ದಾರೆ.ಈ ವೇಳೆ ಮಾತನಾಡಿದ ಅವರು, ದುರಂತದ ನ್ಯಾಯಾಂಗ ತನಿಖೆಗೆ ಒತ್ತಾಯಿಸಿದ್ದಾರೆ. ಉಚ್ಚನ್ಯಾಯಾಲಯದ ಹಂಗಾಮಿ ಮುಖ್ಯ ನ್ಯಾಯಮೂರ್ತಿಗೆ ಪತ್ರ ಬರೆದಿರುವ ಅವರು, ಸಾವನಪ್ಪಿದವರಿಗೆ ೫೦ ಲಕ್ಷ ಪರಿಹಾರ ಹಾಗೂ ಗಾಯಾಳುಗಳಿಗೆ ಉಚಿತ ಚಿಕಿತ್ಸೆ ನೀಡುವಂತೆ ಒತ್ತಾಯಿಸಿದ್ದಾರೆ.

<><><><>

ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಕಾಲ್ತುಳಿತ ಪ್ರಕರಣದಲ್ಲಿ ಸಾವನ್ನಪ್ಪಿದವರ ಕುಟುಂಬಗಳಿಗೆ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿ ತಲಾ ೧೦ ಲಕ್ಷ ರೂಪಾಯಿ ಘೋಷಿಸಿದೆ.ಅಲ್ಲದೇ ದುರಂತದಲ್ಲಿ

ಗಾಯಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಗಾಯಾಳುಗಳ ಚಿಕಿತ್ಸೆಗಾಗಿ ಆರ್‌ಸಿಬಿ ಕೇರ್ ನಿಧಿ ರಚಿಸಲಾಗಿದೆ. ಈಗಾಗಲೇ ಸರ್ಕಾರ ೧೦ ಲಕ್ಷ ಹಾಗೂ ಕೆಎಸ್‌ಸಿಎ ೫ ಲಕ್ಷ ಪರಿಹಾರ ಘೋಷಿಸಿದೆ.

<><><><>

ಗ್ರಾಮೀಣ ಭಾಗದ ಮಕ್ಕಳ ಶಿಕ್ಷಣ ಹಾಗೂ ಆರೋಗ್ಯದ ಅಡಿಪಾಯವೇ ಅಂಗನವಾಡಿ ಕೇಂದ್ರಗಳು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿದ ಅವರು, ಅಂಗನವಾಡಿಗಳಲ್ಲಿ ಮಕ್ಕಳಿಗೆ ಆರೋಗ್ಯ ಹಾಗೂ ಶಿಕ್ಷಣ ನೀಡುವ ವಾತಾವರಣಕ್ಕೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಬೇಕಿದೆ ಎಂದು ಹೇಳಿದ್ದಾರೆ.
<><><><>

ಬಿಜೆಪಿ ಕಾರ್ಯಕರ್ತ ಯೋಗೇಶ್ ಗೌಡ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಹೆಚ್ಚುವರಿ ದಾಖಲೆ ಸಲ್ಲಿಸಲು ಸುಪ್ರೀಂಕೋರ್ಟ್ ಮಾಜಿ ಸಚಿವ ವಿನಯ್ ಕುಲಕರ್ಣಿಗೆ ಒಂದು ದಿನದ ಕಾಲಾವಕಾಶ ನೀಡಿದೆ. ಜಾಮೀನು ರದ್ದುಗೊಳಿಸಲು ಕೋರಿ ರಾಜ್ಯ ಸರ್ಕಾರ ಸಲ್ಲಿಸಿದ ಮನವಿಯ ವಿರುದ್ಧ ಹೆಚ್ಚುವರಿ ದಾಖಲೆ ಸಲ್ಲಿಸಲು ನ್ಯಾಯಮೂರ್ತಿ ಸಂಜಯ್ ಕರೋಲ್ ಮತ್ತು ಸತೀಶ್ ಚಂದ್ರ ಶರ್ಮ ಪೀಠ ಸೂಚಿಸಿದೆ. ಬಳಿಕ ನ್ಯಾಯಾಲಯ ವಿಚಾರಣೆಯನ್ನು ವಿಚಾರಣೆಯನ್ನು ನಾಳೆಗೆ ಮುಂದೂಡಿದೆ.

<><><><>

ಗರೀಬ್ ಕಲ್ಯಾಣ್ ತತ್ವಗಳಿಂದ ಮುನ್ನಡೆಯುತ್ತಿರುವ  ಭಾರತ ಕಳೆದ ಒಂದು ದಶಕದಲ್ಲಿ ಗಮನಾರ್ಹ ಬದಲಾವಣೆಗೆ ಸಾಕ್ಷಿಯಾಗಿದೆ. ಹಿಂದಿನ ೧೧ ವರ್ಷಗಳಲ್ಲಿ ಪ್ರಮುಖ ಕ್ಷೇತ್ರಗಳಲ್ಲಿ ಸರ್ಕಾರದ ಕಲ್ಯಾಣ ಕಾರ್ಯಕ್ರಮಗಳ ಕುರಿತು  ಆಕಾಶವಾಣಿ ಸುದ್ದಿವಿಭಾಗ ವಿಶೇಷ ಸಂಚಿಕೆ ಪ್ರಸಾರ ಮಾಡುತ್ತಿದೆ.ಈ ಮಾಲಿಕೆಯಲ್ಲಿ ಇಂದು, ಭಾರತದ ಯುವ ಪೀಳಿಗೆಯನ್ನು ಸಬಲೀಕರಣಗೊಳಿಸುವ ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯೋಗ ಸೃಷ್ಟಿಯ ಕುರಿತು ಒಂದು ವರದಿ ಇಲ್ಲಿದೆ.

<><><><>

ಕೇಂದ್ರ ಸರ್ಕಾರದ ಮಾತೃವಂದನಾ ಯೋಜನೆ ನನ್ನಂತಹ ಲಕ್ಷಾಂತರ ಮಹಿಳೆಯರಿಗೆ ಆಶಾದಾಯಕವಾಗಿದೆ ಎಂದು ಯೋಜನೆಯ ಫಲಾನುಭವಿ ಮಂಗಳೂರಿನ ಬಬಿತಾ ಎಂ ಮರಕಡ ಹೇಳಿದ್ದಾರೆ.ಯೋಜನೆಯಿಂದ ತನಗಾದ ಲಾಭದ ಕುರಿಂತೆ ಆಕಾಶವಾಣಿಯೊಂದಿಗೆ ತನ್ನ ಅನುಭವ ಹಂಚಿಕೊಂಡಿರುವ ಅವರು, ಆಶಾ ಕಾರ್ಯಕರ್ತೆಯರ ಸಕಾಲಿಕ ಮಾಹಿತಿಯಿಂದ ಅರ್ಜಿ ಹಾಕಿ ಯೋಜನೆಯ ಲಾಭ ಪಡೆದೆ ಎಂದು ತಿಳಿಸಿದ್ದಾರೆ.

<><><><>

ರಾಜ್ಯಾದ್ಯಂತ ಇಂದು ವಿಶ್ವ ಪರಿಸರ ದಿನ ಆಚರಿಸಲಾಯಿತು. ದಕ್ಷಿಣ ಕನ್ನಡ ಜಿಲ್ಲಾಡಳಿತ ಹಾಗೂ ಅರಣ್ಯ ಇಲಾಖೆ ನೇತೃತ್ವದಲ್ಲಿ ಜಿಲ್ಲೆಯಾದ್ಯಂತ ಗಿಡ ನೆಡುವ 'ಹಸಿರು ಕ್ರಾಂತಿ' ಅಭಿಯಾನಕ್ಕೆ ಇಂದು ಮಂಗಳೂರಿನ ಪಡೀಲ್‌ನಲ್ಲಿರುವ ನೂತನ ಜಿಲ್ಲಾಧಿಕಾರಿ ಕಚೇರಿಯಲ್ಲಿ ಚಾಲನೆ ದೊರೆಯಿತು.ಪ್ರಕೃತಿಯನ್ನು ಕಾಪಾಡಿಕೊಂಡು ಗಿಡ ಮರಗಳನ್ನು ಬೆಳೆಸಿದರೆ ಅವೇ ದೇಶದ ಆಸ್ತಿ ಆಗುತ್ತವೆ ಎಂದು ವಿಜಯನಗರ ನಗರಸಭಾ ಅಧ್ಯಕ್ಷ ರೂಪೇಶ್

ಕುಮಾರ್ ಅಭಿಪ್ರಾಯಪಟ್ಟಿದ್ದಾರೆ. ಚಿಕ್ಕಮಗಳೂರು ನಗರದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮ ಆಚರಿಸಲಾಯಿತು. ಮುಳ್ಳಯ್ಯನಗಿರಿ ಉಳಿಸಿ ವೇದಿಕೆ ಅಧ್ಯಕ್ಷ ಗುರುವೇಶ್ ಮಾತನಾಡಿ, ಪರಿಸರ ರಕ್ಷಣೆ ನಮ್ಮೆಲ್ಲರ ಹೊಣೆ. ಚಿಕ್ಕಮಗಳೂರಿನ ಮುಳ್ಳಯನಗಿರಿ ಸೇರಿ ಹಲವೆಡೆ ಪ್ಲಾಸ್ಟಿಕ್ ಬಳಕೆ ಅಧಿಕವಾಗಿದ್ದು ಪ್ಲಾಸ್ಟಿಕ್ ನಿಷೇಧ ಮಾಡಿ ಪರಿಸರ ಉಳಿಸಬೇಕಿದೆ ಎಂದು ತಿಳಿಸಿದರು.ರಾಷ್ಟ್ರೀಯ ಸೇವಾ ಯೋಜನೆ ಘಟಕದಿಂದ ಕೋಲಾರದ ತೋಟಗಾರಿಕಾ ಮಹಾವಿದ್ಯಾಲಯದಲ್ಲಿ ವಿಶ್ವ ಪರಿಸರ ದಿನಾಚರಣೆ ನಡೆಯಿತು.

<><><><>

ರೈಲ್ವೆ ಲೆವೆಲ್ ಕ್ರಾಸಿಂಗ್‌ಗಳಲ್ಲಿ ಸುರಕ್ಷತೆಯ ಕುರಿತು ರಸ್ತೆ ಬಳಕೆದಾರರಲ್ಲಿ ಜಾಗೃತಿ ಮೂಡಿಸಲು ಅಂತಾರಾಷ್ಟ್ರೀಯ ಲೆವೆಲ್ ಕ್ರಾಸಿಂಗ್ ಜಾಗೃತಿ ದಿನ ಆಚರಿಸಲಾಯಿತು.ಕೆ.ಎಸ್.ಆರ್. ಬೆಂಗಳೂರು ನಿಲ್ದಾಣದಲ್ಲಿ ನಡೆದ ಜಾಗೃತಿ ಕಾರ್ಯಕ್ರಮದಲ್ಲಿ ಬೆಂಗಳೂರು ವಿಭಾಗದ ವಿಭಾಗೀಯ ರೈಲ್ವೆ ವ್ಯವಸ್ಥಾಪಕ ಆಶುತೋಷ್ ಕುಮಾರ್ ಸಿಂಗ್ ಮಾತನಾಡಿ, ಲೆವೆಲ್ ಕ್ರಾಸಿಂಗ್ ಗೇಟ್‌ಗಳಲ್ಲಿ ಸುರಕ್ಷತಾ ನಿಯಮಗಳ ಪಾಲನೆಯ ಮಹತ್ವದ ಕುರಿತು ತಿಳಿಸಿದರು.ರಸ್ತೆ ಬಳಕೆದಾರರು ಲೆವೆಲ್ ಕ್ರಾಸಿಂಗ್ ಗೇಟ್ ಮುಚ್ಚಿರುವಾಗ ಹಳಿ ದಾಟುವ ಪ್ರಯತ್ನ ಮಾಡಬಾರದು. ಗೇಟ್‌ಗಳ ಬಳಿ ಇಯರ್ ಫೋನ್‌ಗಳನ್ನು ಬಳಸಬಾರದು ಎಂದು ಸಲಹೆ ನೀಡಿದರು.

**<><><>ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.<><><><>**